## ಕರ್ನಾಟಕ ಸರ್ಕಾರದ ನಡವಳಿಗಳು
## ಜಲಸಂಪನ್ಮೂಲ ಇಲಾಖೆ

**ವಿಷಯ:**- ಕೊಪ್ಪಳ ಜಿಲ್ಲೆಯ ಹಿರೇಹಳ್ಳ ಯೋಜನೆಯ ರೂ. 507.00 ಕೋಟಿಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ಹಿರೇಹಳ್ಳ/ಪರಿಷ್ಕೃತ ಅಂದಾಜು/2019/4253-ದಿನಾಂಕ:12.11.2019, ಸಂಖ್ಯೆ.6117, ದಿನಾಂಕ:30.01.2021, ಸಂಖ್ಯೆ.1256-ದಿನಾಂಕ:06.07.2020, ಸಂಖ್ಯೆ. 3951, ದಿನಾಂಕ:12.11.2020, ಸಂಖ್ಯೆ. 3951A, ದಿನಾಂಕ:09.11.2020, ಹಾಗೂ ಸಂಖ್ಯೆ 0426 ದಿನಾಂಕ:26.04.2021.

--***---

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಹಿರೇಹಳ್ಳ ಯೋಜನೆಯ ಆರ್&ಆರ್ ಕಾಮಗಾರಿಯ ರೂ.63.42 ಕೋಟಿ ಮೊತ್ತ ಒಳಗೊಂಡಂತೆ ಬಾಕಿ ಇರುವ ಕಾಮಗಾರಿ ಮತ್ತು ಬಾಕಿ ಭೂಸ್ವಾಧೀನ ಪ್ರಕರಣಗಳಿಗಾಗಿ ರೂ.121.00 ಕೋಟಿ ಅನುದಾನದ ಅವಶ್ಯಕತೆ ಇದ್ದು, ಈ ಮೊತ್ತಕ್ಕೆ ಮಾತ್ರ ಮುಂಬರುವ ವರ್ಷಗಳಲ್ಲಿ ವೆಚ್ಚ ಮಾಡಬೇಕಾಗಿರುವುದರಿಂದ. ಹಿರೇಹಳ್ಳ ಯೋಜನೆಯ ಸಂತ್ರಸ್ಥರ ಅನುಕೂಲತೆಯ ಹಿತದೃಷ್ಟಿಯಿಂದ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಸದರಿ ಪ್ರಸ್ತಾವನೆಯ ಪರಿಷ್ಕೃತ ಅಂದಾಜು ಪಟ್ಟಿಯನ್ನು ದಿನಾಂಕ:26/08/2020 ರಂದು ಜರುಗಿದ ನಿಗಮದ 70ನೇ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿದ್ದು, ಚರ್ಚೆಯ ನಂತರ ಸಮಿತಿಯು ಸದರಿ ಪರಿಷ್ಕೃತ ಅಂದಾಜು ಪಟ್ಟಿಯನ್ನು ನಿಗಮದ ನಿರ್ದೇಶಕರ ಮಂಡಳಿ ಸಭೆಯ ಅನುಮೋದನೆ ಪಡೆದು ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ.

ಪ್ರಸ್ತಾವನೆಯನ್ನು ದಿನಾಂಕ:05/10/2020 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿ 93ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಚರ್ಚೆಯ ನಂತರ, ನಿಗಮದ ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ, ಹಿರೇಹಳ್ಳ ಯೋಜನೆಯ ರೂ.507.00 ಕೋಟಿಗಳ ಪರಿಷ್ಕೃತ ಅಂದಾಜಿಗೆ ಚುನಾವಣಾ ಆಯೋಗದ ತೀರುವಳಿಗೆ ಒಳಪಟ್ಟು ಮಂಡಳಿಯು ಅನುಮೋದನೆ ನೀಡಿ, ಇದಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ, ಹಿರೇಹಳ್ಳ ಯೋಜನೆಯ ರೂ. 507.00 ಕೋಟಿಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಸರ್ಕಾರವನ್ನು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 65 ಎಂಟಿಪಿ 2019, ಬೆಂಗಳೂರು,**
**ದಿನಾಂಕ: 17.06.2021**

ಕೊಪ್ಪಳ ಜಿಲ್ಲೆಯ ಹಿರೇಹಳ್ಳ ಯೋಜನೆಯ ರೂ. 507.00 ಕೋಟಿಗಳ (ಐನೂರ ಏಳು ಕೋಟಿ ರೂಪಾಯಿಗಳು ಮಾತ್ರ) ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 17 ಆಕೋ-1/2020 (ಇ-ಆಫೀಸ್) ದಿನಾಂಕ:16.06.2021ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 17 ಎಂಸಿಎಂ 2021-ಪಿಪಿಡಿ, ದಿನಾಂಕ:15.06.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/6/21

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ.

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ ಶಾಖೆ) ವಿಧಾನ ಸೌಧ.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9 . ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯರ್ಶಿ, ಯೋಜನಾ ಇಲಾಖೆ.
10 ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11 ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ), ಜಲಸಂಪನ್ಮೂಲ ಇಲಾಖೆ.
13 ತಾಂತ್ರಿಕ ಸಹಾಯಕರು, ತಾಂತ್ರಿಕ-6, ಜ.ಸಂ.ಇ.
14 ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.